## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಾವಣಗೆರೆ ಜಿಲ್ಲೆಯ ಹರಿಹರ ವಿಧಾನಸಭಾ ಕ್ಷೇತ್ರದ ನಾಗೇನಹಳ್ಳಿ ಮತ್ತು ದೇವರಬಳಕೇರಿ ಗ್ರಾಮವನ್ನು ಗ್ರಾಮ ವಿಕಾಸ ಯೋಜನೆಯಡಿ ಸೇರ್ಪಡಿಸಿ ಅನುಷ್ಠಾನಗೊಳಿಸುವ ಕುರಿತು.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ : 50 : ಸುಗ್ರಾಯೋ : 2014, ದಿ:20.10.2014.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ : 63 :ಗ್ರಾವಿಯೊ : 2015, ಬೆಂಗಳೂರು, ದಿನಾಂಕ: 28-08-2015.
3. ಮಾನ್ಯ ಶಾಸಕರು, ಹರಿಹರ ವಿಧಾನ ಸಭಾ ಕ್ಷೇತ್ರ ಇವರು ಸರ್ಕಾರಕ್ಕೆ ಪತ್ರ ಬರೆದ ದಿನಾಂಕ: 04-06-2015.

### ತಿದ್ದುಪಡಿ ಆದೇಶ

**ಪ್ರಸ್ತಾವನೆ:**

ಉಲ್ಲೇಖಿತ (1) ರ ಆದೇಶದಲ್ಲಿ ರಾಜ್ಯದ ಎಲ್ಲಾ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಗ್ರಾಮ ವಿಕಾಸ ಯೋಜನೆಯನ್ನು ಅನುಷ್ಠಾನಗೊಳಿಸಲು ತಿಳಿಸಲಾಗಿದೆ. ಅದರಂತೆ ಉಲ್ಲೇಖ (2) ರ ಸರ್ಕಾರಿ ಆದೇಶದಲ್ಲಿ ಹರಿಹರ ವಿಧಾನ ಸಭಾ ಕ್ಷೇತ್ರದಿಂದ 3 ಗ್ರಾಮಗಳಾದ ಕಮಲಾಪುರ, ದೀಟೂರ ಮತ್ತು ಎಳೆಹೊಳೆ ಗ್ರಾಮಗಳಿಗೆ ಕ್ರಮವಾಗಿ ತಲಾ ರೂ. 125.00 ಲಕ್ಷಗಳ ಅನುದಾನವನ್ನು ನಿಗಧಿಪಡಿಸಿ ಆದೇಶ ಹೊರಡಿಸಲಾಗಿತ್ತು. ಮಾನ್ಯ ಶಾಸಕರು, ಹರಿಹರ ವಿಧಾನ ಸಭಾ ಕ್ಷೇತ್ರ ಇವರು ಉಲ್ಲೇಖ (3) ರೀತ್ಯಾ ಸರ್ಕಾರಕ್ಕೆ ಮನವಿ ಸಲ್ಲಿಸಿ, ಈಗಾಗಲೇ ಸರ್ಕಾರದ ಆದೇಶದಲ್ಲಿ ಪರಿಗಣಿಸಿರುವ ತಮ್ಮ ಮತಕ್ಷೇತ್ರದ ಕಮಲಾಪುರ, ದೀಟೂರ ಮತ್ತು ಎಳೆಹೊಳೆ ಗ್ರಾಮಗಳೊಂದಿಗೆ ಮತ್ತೆರಡು ಗ್ರಾಮಗಳಾದ ನಾಗೇನಹಳ್ಳಿ ಮತ್ತು ದೇವರಬಳಕೇರಿ ಗ್ರಾಮಗಳು ಹಿಂದುಳಿದ ಗ್ರಾಮಗಳಾಗಿರುವುದರಿಂದ ಸದರಿ ಗ್ರಾಮಗಳನ್ನು ಗ್ರಾಮ ವಿಕಾಸ ಯೋಜನೆಯಡಿ ಸೇರ್ಪಡೆಗೊಳಿಸಲು ಕೋರಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ ಅದರಂತೆ ಹರಿಹರ ವಿಧಾನ ಸಭಾ ಕ್ಷೇತ್ರದಲ್ಲಿ ನಾಗೇನಹಳ್ಳಿ ಮತ್ತು ದೇವರಬಳಕೇರಿ ಗ್ರಾಮವನ್ನು ಗ್ರಾಮ ವಿಕಾಸ ಯೋಜನೆಯಡಿ ಪರಿಗಣಿಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ : 26 : ಗ್ರಾವಿಯೋ : 2015, ಬೆಂಗಳೂರು, ದಿನಾಂಕ: 21-09-2015.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ ಹರಿಹರ ವಿಧಾನಸಭಾ ಕ್ಷೇತ್ರದಲ್ಲಿ ಈಗಾಗಲೇ ಆಯ್ಕೆಗೊಂಡಿದ್ದ 3 ಗ್ರಾಮಗಳೊಂದಿಗೆ ಹರಿಹರ ವಿಧಾನ ಸಭಾ ಕ್ಷೇತ್ರದಲ್ಲಿ ನಾಗೇನಹಳ್ಳಿ ಮತ್ತು ದೇವರಬಳಕೇರಿ ಗ್ರಾಮವನ್ನು ಗ್ರಾಮ ವಿಕಾಸ ಯೋಜನೆಯಡಿ ಸೇರ್ಪಡಿಸಿ ಪರಿಗಣಿಸಲಾಗಿದ್ದು, ವಿವರಗಳು ಕೆಳಕಂಡಂತಿರುತ್ತವೆ.

(ರೂ. ಲಕ್ಷಗಳಲ್ಲಿ)

| ಜಿಲ್ಲೆ | ವಿಧಾನ ಸಭಾ ಕ್ಷೇತ್ರ | ಕ್ರ. ಸಂ | ಗ್ರಾಮಗಳ ಹೆಸರು | ಪ. ಜಾತಿ | ಪ. ಪಂಗಡ | ಒಟ್ಟು ಜನ ಸಂಖ್ಯೆ | ಗ್ರಾಮವಾರು ನಿಗದಿಪಡಿಸಿದ ಅನುದಾನ | ವಿಧಾನ ಸಭಾ ಕ್ಷೇತ್ರವಾರು ನಿಗದಿಪಡಿಸಿದ ಅನುದಾನ |
|---|---|---|---|---|---|---|---|---|
| ದಾವಣಗೆರೆ | ಹರಿಹರ | 1 | ಕಮಲಾಪುರ | 22 | 33 | 1844 | 75.00 | 375 |
| | | 2 | ದೀಟೂರು | 90 | 37 | 1831 | 75.00 | |
| | | 3 | ಎಳೆಹೊಳೆ | 282 | 280 | 2024 | 75.00 | |
| | | 4 | ನಾಗೇನಹಳ್ಳಿ | 6 | 0 | 1160 | 75.00 | |
| | | 5 | ದೇವರಬಳಕೇರಿ | 449 | 677 | 2984 | 75.00 | |
| ಒಟ್ಟು | | | | 849 | 1027 | 9843 | 375.00 | |

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ದಾವಣಗೆರೆ ಜಿಲ್ಲೆಯ ಹರಿಹರ ವಿಧಾನ ಸಭಾ ಕ್ಷೇತ್ರದಿಂದ ಮೇಲ್ಕಂಡ ಗ್ರಾಮಗಳನ್ನು ಗ್ರಾಮ ವಿಕಾಸ ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ. ಯೋಜನೆಯನ್ನು ಅನುಷ್ಠಾನಗೊಳಿಸುವಾಗ ಈ ಕೆಳಕಂಡ ನಿಯಮಗಳನ್ನು ಪಾಲಿಸಲು ಆದೇಶಿಸಿದೆ.

1. ಮೇಲ್ಕಂಡ ಗ್ರಾಮಗಳ ಆಯ್ಕೆಪಟ್ಟಿಯಲ್ಲಿ ವಿವರಿಸಿರುವಂತೆ ಗ್ರಾಮಗಳಿಗೆ ನಿಗಧಿಪಡಿಸಿರುವ ಅನುದಾನದ ಮಿತಿಯಂತೆ ಕ್ರಮ ವಹಿಸುವುದು.

2. ಗ್ರಾಮ ಪಂಚಾಯತಿಗಳು ವಾರ್ಡ್‌ಸಭೆ / ಗ್ರಾಮಸಭೆಗಳನ್ನು ನಡೆಸಿ ಗ್ರಾಮಾಭಿವೃದ್ಧಿ ಯೋಜನೆಯನ್ನು ಮಾರ್ಗಸೂಚಿಯಲ್ಲಿರುವಂತೆ ತಯಾರಿಸಿ ಗ್ರಾಮ ಪಂಚಾಯತಿಯ ಅನುಮೋದನೆಯನ್ನು ಪಡೆಯುವುದು. ಅನುಮೋದನೆಯಾದ ಗ್ರಾಮಾಭಿವೃದ್ಧಿ ಯೋಜನೆಯನ್ನು ತಾಲ್ಲೂಕು, ಜಿಲ್ಲಾ ಪಂಚಾಯತಿ ಹಾಗೂ ಸರ್ಕಾರಕ್ಕೆ ಕಡ್ಡಾಯವಾಗಿ ಸಲ್ಲಿಸುವುದು.

3. ಗ್ರಾಮ ಪಂಚಾಯತಿಗಳು ಎಸ್‌ಸಿಪಿ / ಟಿಎಸ್‌ಪಿ ಯೋಜನೆಯಡಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಕಾಲೋನಿಗಳ ಅಭಿವೃದ್ಧಿಗೆ ಕೈಗೊಳ್ಳುವ ಕ್ರಿಯಾ / ಗ್ರಾಮಾಭಿವೃದ್ಧಿ ಯೋಜನೆಯನ್ನು ಪ್ರತ್ಯೇಕವಾಗಿ ಕಡ್ಡಾಯವಾಗಿ ತಯಾರಿಸುವುದು.

4. ಎಸ್‌ಸಿಪಿ, ಟಿಎಸ್‌ಪಿ ಯೋಜನೆಯಡಿ ಕ್ರಿಯಾ ಯೋಜನೆಯನ್ನು ತಯಾರಿಸುವಾಗ ಒಟ್ಟು ಅನುದಾನದ ಪೈಕಿ ಕನಿಷ್ಠ ಶೇ.18% ರಷ್ಟು ಅನುದಾನವನ್ನು ಪರಿಶಿಷ್ಟ ಜಾತಿ ವರ್ಗದವರಿಗೆ ಮತ್ತು ಕನಿಷ್ಠ ಶೇ.7% ರಷ್ಟು ಅನುದಾನವನ್ನು ಪರಿಶಿಷ್ಟ ಪಂಗಡದವರಿಗೆ ಮೀಸಲಿಡುವುದು.

5. ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾದ 4 ಗ್ರಾಮಗಳ ಪೈಕಿ ಹೆಚ್ಚು ಎಸ್‌ಸಿ, ಎಸ್‌ಟಿ ಜನಸಂಖ್ಯೆ ಹೊಂದಿರುವ 2 ಗ್ರಾಮಗಳನ್ನು ಆಯ್ಕೆ ಮಾಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ವಾಸಿಸುವ ಕಾಲೋನಿಗಳನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳುವುದು.

6. ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡದವರಿಗೆ ಮೀಸಲಾದ ಅನುದಾನವನ್ನು ಯಾವುದೇ ಕಾರಣಕ್ಕೂ ಮಾರ್ಗಪಲ್ಲಟ ಮಾಡುವಂತಿಲ್ಲ ಹಾಗೂ ಅನುಮೋದಿತ ಯೋಜನೆಯಂತೆ ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡದ ಕಾಲೋನಿಗಳ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು.

7. ಗ್ರಾಮ ಪಂಚಾಯತಿಗಳು ಗ್ರಾಮಾಭಿವೃದ್ಧಿ ಯೋಜನೆಯನ್ನು ತಯಾರಿಸುವಾಗ ಮುಖ್ಯ ಮಂತ್ರಿಗಳ 21 ಅಂಶಗಳ ಕಾರ್ಯಕ್ರಮಗಳನ್ನು ಕಡ್ಡಾಯವಾಗಿ ಮಾರ್ಗಸೂಚಿಯ ಪುಟ ಸಂಖ್ಯೆ 27 ರಲ್ಲಿನ 5.1.2 ರಲ್ಲಿ ಸೂಚಿಸಿರುವ ಪರಿಮಾಣಗಳಂತೆ ಅಳವಡಿಸುವುದು ಹಾಗೂ ಕಾರ್ಯಕ್ರಮವಾರು ಭರಿಸುವ ಅನುದಾನವನ್ನು ಸಹ ಪ್ರತ್ಯೇಕವಾಗಿ ನಮೂದಿಸುವುದು.

8. ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮಗಳಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಾರ್ಗಸೂಚಿ ಪುಸ್ತಕದ ಪುಟ ಸಂಖ್ಯೆ 61 ಮತ್ತು 62 ರಲ್ಲಿರುವ ಯೋಜನೆಯ ಅನುಷ್ಠಾನದ ವೇಳಾಪಟ್ಟಿಯಂತೆ ಅನುಷ್ಠಾನಕ್ಕೆ ತಂದು ಎಲ್ಲಾ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅಕ್ಟೋಬರ್ 2, 2016ರ ಒಳಗಾಗಿ ಮುಕ್ತಾಯಗೊಳಿಸಲು ಕ್ರಮ ಕೈಗೊಳ್ಳುವುದು.

9. ಶಾಸಕರ ಅಧ್ಯಕ್ಷತೆಯಲ್ಲಿ ರಚನೆಯಾದ ಗ್ರಾಮ ವಿಕಾಸ ಯೋಜನೆಯ ಉಸ್ತುವಾರಿ ಸಭೆಯನ್ನು ಕಡ್ಡಾಯವಾಗಿ 2 ತಿಂಗಳಿಗೊಮ್ಮೆ ನಡೆಯುವಂತೆ ಕ್ರಮ ಕೈಗೊಳ್ಳುವುದು. ಪ್ರಗತಿಯನ್ನು ಪರಾಮರ್ಶಿಸಿ ಗ್ರಾಮದ ಅಭಿವೃದ್ಧಿಗೆ ಎಲ್ಲಾ ರೀತಿಯ ಸಲಹೆ, ಸೂಚನೆ, ಮಾರ್ಗದರ್ಶನಗಳನ್ನು ಪಡೆದು ಮತ್ತು ವಿವಿಧ ಯೋಜನೆಗಳಲ್ಲಿ ಲಭ್ಯವಾಗುವ ಅನುದಾನವನ್ನು ಒಗ್ಗೂಡಿಸಿ ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮವನ್ನು ಸರ್ವತೋಮುಖವಾಗಿ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳುವುದು.

10. ಗ್ರಾಮ ವಿಕಾಸ ಯೋಜನೆಯ ಅನುದಾನ ಹಾಗೂ ಒಗ್ಗೂಡಿಸಿದ ಕಾರ್ಯಕ್ರಮಗಳ ಅನುದಾನವನ್ನು ಪ್ರತ್ಯೇಕ ವಹಿಗಳಲ್ಲಿ (Separate Register) ನಿರ್ವಹಿಸುವುದು ಹಾಗೂ ಆಯಾ ಕಾರ್ಯ ಕ್ರಮಗಳ ಅನುಧಾನವನ್ನು ಬಳಸುವಾಗ ಸರ್ಕಾರ ಹೊರಡಿಸಿದ ಆದೇಶ/ ಮಾರ್ಗಸೂಚಿ/ ಸುತ್ತೋಲೆಗಳನ್ವಯ ಅನುಷ್ಠಾನಕ್ಕೆ ತರುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು :**

1. ಮಹಾ ಲೇಖಪಾಲರು(ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾ ಲೇಖಪಾಲರು(ಆಡಿಟ್-1 & 2), ಕರ್ನಾಟಕ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ಮುಖ್ಯಮಂತ್ರಿಗಳ ಕಾರ್ಯಾಲಯ, ವಿಧಾನಸೌಧ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತ ಕಾರ್ಯದರ್ಶಿ. ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ..ಅ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ..ಅ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
10. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ದಾವಣಗೆರೆ.
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ. ಅ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
12. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
13. ಮುಖ್ಯ ಇಂಜಿನಿಯರ್, ಗ್ರಾಮೀಣಾಭಿವೃದ್ಧಿ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಕಟ್ಟಡ, ಬೆಂಗಳೂರು-20.
14. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಬೆಂಗಳೂರು.
15. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್, ಸೆಂಟರ್, ಖಜಾನೆ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
16. ಜಿಲ್ಲಾ ಖಜಾನಾಧಿಕಾರಿಗಳು, ದಾವಣಗೆರೆ.
17. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾ ಮತ್ತು ಪಂ. ರಾಜ್ ಇಲಾಖೆ, ಬೆಂಗಳೂರು.
18. ಗಣಕ ಕೋಶ/ ಮಾಹಿತಿ ಕೇಂದ್ರಕ್ಕೆ (10) ಪ್ರತಿಗಳು.
19. ರಕ್ಷಾ ಕಡತ/ ಹೆಚ್ಚುವರಿ ಪ್ರತಿ.